ಪ್ರಜಾವಾಣಿ

## ಬ್ಯಾಸ್ಕೆಟ್‌ಬಾಲ್: ಜೈನ್ ವಿಶ್ವವಿದ್ಯಾಲಯಕ್ಕೆ ಗೆಲುವು

ಬೆಂಗಳೂರು: ಜೈನ್ ವಿಶ್ವವಿದ್ಯಾಲಯ ತಂಡ ಚೆನ್ನೈನಲ್ಲಿ ಆರಂಭವಾದ ಅಖಿಲ ಭಾರತ ಅಂತರ ವಿಶ್ವವಿದ್ಯಾಲಯ ಬ್ಯಾಸ್ಕೆಟ್‌ಬಾಲ್ ಟೂರ್ನಿಯಲ್ಲಿ ಶುಭಾರಂಭ ಮಾಡಿದೆ.

ಸೋಮವಾರ ಇಲ್ಲಿನ ಸತ್ಯಾಂಬ ವಿಶ್ವವಿದ್ಯಾಲಯದಲ್ಲಿ ನಡೆದ ಟೂರ್ನಿಯಲ್ಲಿ ಬೆಂಗಳೂರಿನ ಜೈನ್ ವಿಶ್ವವಿದ್ಯಾಲಯ 61–48ರಲ್ಲಿ ಪಶ್ಚಿಮ ಬಂಗಾಳದ ಬರ್ದ್ವಾನ್ ವಿಶ್ವವಿದ್ಯಾಲಯ ತಂಡವನ್ನು ಮಣಿಸಿತು. ವಿಜಯೀ ತಂಡದ ಕ್ಲೈವ್ ಜೋಯಾ 20, ವಿನು ಪಳನಿ 17, ಮೈಕೆಲ್ 11 ಪಾಯಿಂಟ್ಸ್ ಕಲೆಹಾಕಿ ಮಿಂಚಿದರು.